# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1184

2) ಸದಸ್ಯರ ಹೆಸರು : ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 30-09-2020

4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕಾ ಅಭಿವೃದ್ಧಿ ಕೇಂದ್ರವನ್ನು ಬಾಗಲಕೋಟೆಯಲ್ಲಿ ಸ್ಥಾಪನೆ ಮಾಡಿರುವ ಮೂಲ ಉದ್ದೇಶವೇನು; | ರಾಜ್ಯ ಸರ್ಕಾರವು 2016-17ರ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-59ರಲ್ಲಿ ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ "ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರವನ್ನು" ಸ್ಥಾಪಿಸಲು ಘೋಷಣೆ ಮಾಡಿದ ಪ್ರಕಾರ ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲಾಗಿದೆ.<br><br>**<u>ಈ ಕೇಂದ್ರದ ಉದ್ದೇಶಗಳು</u>**<br><br>1. ಉತ್ತರ ಕರ್ನಾಟಕ ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಸ್ಥಳೀಯ ಅಗತ್ಯಗೆ ಅನುಗುಣವಾಗಿ ಕಾರ್ಯಕ್ರಮ ರೂಪಿಸುವುದು.<br>2. ಅಗತ್ಯ ಯೋಜನಾ ವರದಿ ಸಿದ್ಧಪಡಿಸುವುದು ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನ ಪಡೆಯುವುದು.<br>3. ಉತ್ತರ ಕರ್ನಾಟಕ ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಅಗತ್ಯವಾದ ತರಬೇತಿ ವಿಸ್ತರಣೆ, ಅಭಿವೃದ್ಧಿ ಮತ್ತು ಪ್ರಾತ್ಯಕ್ಷತೆ ರೂಪಿಸುವುದು.<br>4. ಮೀನುಗಾರಿಕೆ ಇಲಾಖೆಯಿಂದ ಆಯ್ದ ಮೀನುಮರಿ ಪಾಲನಾ ಕೇಂದ್ರ ಹಸ್ತಾಂತರ ಮಾಡಿಕೊಂಡು ಅಭಿವೃದ್ಧಿಪಡಿಸುವುದು.<br>5. ಆಯ್ದ ಜಲಪ್ರದೇಶವನ್ನು ಸರ್ಕಾರ / ಇತರೇ ಸಂಸ್ಥೆಯಿಂದ ಹಸ್ತಾಂತರ ಮಾಡಿಕೊಂಡು ಅಭಿವೃದ್ಧಿಪಡಿಸುವುದು.<br>6. ಮೀನು ಮಾರಾಟ ವ್ಯವಸ್ಥೆಯ ಅಭಿವೃದ್ಧಿಗೆ ಅಗತ್ಯ ಕ್ರಮ ವಹಿಸುವುದು.<br>7. ಇಲಾಖೆ ಅನುಮೋದನೆ ಮೇರೆಗೆ ಕೇಂದ್ರ ಮತ್ತು ರಾಜ್ಯದ ಸರ್ಕಾರದ ಆಯ್ದ ಕಾರ್ಯಕ್ರಮಗಳ ಅನುಷ್ಠಾನ ಮತ್ತು ಅಗತ್ಯ ಪೂರಕ ಚಟುವಟಿಕೆ ನಿರ್ವಹಿಸುವುದು |

| | | |
|---|---|---|
| ಆ) | ಈ ಕೇಂದ್ರದ ಮೂಲಕ ಇದುವರೆಗೆ ಯಾವುದೇ ಯೋಜನೆಗಳನ್ನು ಅನುಷ್ಠಾನ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಇ) | ಮೀನುಗಾರರ ಶ್ರೇಯೋಭಿವೃದ್ಧಿ ಕೇಂದ್ರವನ್ನು ಸದೃಡ ಗೊಳಿಸುವಲ್ಲಿ ಸರ್ಕಾರ ವಿಫಲವಾಗುವುದೇ; ಈ ಕೇಂದ್ರದ ಅಭಿವೃದ್ಧಿಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು; | ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರವು ಈವರೆಗೆ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡದಿರುವುದರಿಂದ ಈವರೆಗೆ ಯಾವುದೇ ಯೋಜನೆಗಳನ್ನು ಅನುಷ್ಠಾನ ಮಾಡಿರುವುದಿಲ್ಲ.<br><br>ಸದರಿ ಕೇಂದ್ರದಿಂದ ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ. |
| ಈ) | ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭವಾದಾಗಿನಿಂದ ವೇತನಕ್ಕಾಗಿ ಯೋಜನೆಗಳ ಅನುಷ್ಠಾನಕ್ಕಾಗಿ ವೆಚ್ಚವಾಗಿರುವ ಹಣವೆಷ್ಟು; | ವೇತನಕ್ಕಾಗಿ ರೂ.6,39,632.00ಗಳು ವೆಚ್ಚವಾಗಿರುತ್ತದೆ. ಯೋಜನೆಗಳ ಅನುಷ್ಠಾನಕ್ಕಾಗಿ ಯಾವುದೇ ಅನುದಾನ ವೆಚ್ಚವಾಗಿರುವುದಿಲ್ಲ. |
| ಉ) | ಈ ಕೇಂದ್ರದಲ್ಲಿ ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು? (ವಿವರ ನೀಡುವುದು) | ಈ ಕೇಂದ್ರದಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |

ಪಸಂಮೀ 202 ಮೀಇಯೋ 2020

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1184 ರ**

**ಅನುಬಂಧ-1**

| ಕ್ರ. ಸಂ | ಮಂಜೂರಾದ ಹುದ್ದೆಗಳ ಹೆಸರು | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 01 | ವ್ಯವಸ್ಥಾಪಕ ನಿರ್ದೇಶಕರು | 01 | 00 | ಮೀನುಗಾರಿಕೆ ಜಂಟಿ ನಿರ್ದೇಶಕರು (ಒಳನಾಡು) ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು ಇವರು ಪ್ರಸ್ತುತ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಪ್ರಭಾರ ವಹಿಸಿಕೊಂಡಿರುತ್ತಾರೆ. |
| 02 | ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇ-1) | 02 | 02 | 00 |
| 03 | ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇ-2) | 06 | 00 | 06 |
| 04 | ಕಚೇರಿ ಅಧೀಕ್ಷಕರು | 01 | C0 | 01 |
| 05 | ಪ್ರಥಮ ದರ್ಜೆ ಸಹಾಯಕರು | 02 | 00 | 02 |
| 06 | ದ್ವಿತೀಯ ದರ್ಜೆ ಸಹಾಯಕರು | 02 | 01 | 01 |
| 07 | ಬೆರಳಚ್ಚುಗಾರರು | 01 | 00 | 01 |
| 08 | ವಾಹನ ಚಾಲಕರು | 01 | 00 | 01 |
| 09 | ಮೀನುಗಾರಿಕೆ ಕ್ಷೇತ್ರಪಾಲಕರು | 05 | 00 | 05 |
| 10 | ಗ್ರೂಪ್ ಡಿ | 03 | 00 | 03 |
| | ಒಟ್ಟು | 24 | 03 | 21 |

******